Akashvani : Bangalore
Regional Bulletin In Kannada
19.10.2025 / 2.30 pm
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಸಹಜ ಕೃಷಿಯತ್ತ ಒಲವು ತೋರುವಂತೆ ರೈತರಿಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಸಲಹೆ
- ರಾಜ್ಯದಲ್ಲಿ ಎರಡನೇ ಹಂತದ ನಗರಗಳಲ್ಲಿ ಉದ್ಯಮಗಳಿಗೆ ವಿನಾಯಿತಿ ನೀಡಬೇಕು - ಕೇಂದ್ರ ಸಚಿವ ಪಲ್ಹಾದ್ ಜೋಶಿ
- ಬೆಂಗಳೂರಿನ ಮೂಲಭೂತ ಸೌಕರ್ಯಗಳ ಬಗ್ಗೆ ಟೀಕೆ; ಉದ್ಯಮಿಗಳ ವಿರುದ್ಧ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಸಮಾಧಾನ
- ಚಿಕ್ಕಮಗಳೂರಿನ ಬಿಂಡಿಗ ದೇವಿರಮ್ಮ ದರ್ಶನಕ್ಕೆ ಹರಿದುಬಂದ ಭಕ್ತ ಸಾಗರ

******************

ಭತ್ತದಂತಹ ಬೆಳೆಗಳ ಜೊತೆಗೆ ಬೇಳೆಕಾಳುಗಳನ್ನು ಬೆಳೆಯಲು ರೈತರು ಮುಂದಾಗಬೇಕು. ಇದರಿಂದ ಬೇಳೆ ಕಾಳುಗಳ ಆಮದು ತಗ್ಗಲಿದೆ ಎಂದು ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕೆಗಳ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕರೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಇಂದು ೩ನೇ ಕೃಷಿ ಕೀಟ ಜೈವಿಕ ನಿಯಂತ್ರಣ ಪ್ರದರ್ಶನ ಮತ್ತು ಭಾರತೀಯ ಕೃಷಿ ಸಂಶೋಧನಾ ಮಂಡಳಿಯ ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲಗಳ ಬ್ಯೂರೋದ ೩೩ನೇ ಸಂಸ್ಥಾಪನಾ ದಿನಾಚರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಕೇಂದ್ರ ಸರ್ಕಾರ ರೈತರ ಕಲ್ಯಾಣ ಹಾಗೂ ಅಭ್ಯುದಯಕ್ಕೆ ಬದ್ಧವಾಗಿದೆ ಎಂದು ತಿಳಿಸಿದರು. ಕೀಟನಾಶಕಗಳಿಂದ ಮಣ್ಣಿನ ಫಲವತ್ತತೆ ಕಡಿಮೆಯಾಗುತ್ತಿದ್ದು ರೈತರು ಸಹಜ ಕೃಷಿಗೆ ಒತ್ತು ನೀಡಬೇಕು ಎಂದು ಸಲಹೆ ನೀಡಿದ್ದಾರೆ. ಇದೇ ವೇಳೆ ಮಾತನಾಡಿದ ಕೇಂದ್ರ ಅತಿ ಸಣ್ಣ, ಸಣ್ಣ ಉದ್ಯಮಗಳು ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ದೇಶದಲ್ಲಿ ೧೪೦ ಕೋಟಿ ಜನಸಂಖ್ಯೆ ಇದ್ದರೂ ಅದಕ್ಕಿಂತ ಹೆಚ್ಚು

ಜನರಿಗೆ ಉಪಯೋಗವಾಗುವಷ್ಟು ಕೃಷಿ ಹಾಗೂ ತೋಟಗಾರಿಕಾ ಉತ್ಪಾದನೆಯಾಗುತ್ತಿದೆ ಎಂದು ಹೇಳಿದ್ದಾರೆ.

*****************

ಮನುಷ್ಯನ ಆರೋಗ್ಯ ಭೂಮಿಯ ಹಾಗೂ ಮಣ್ಣಿನ ಆರೋಗ್ಯದ ಮೇಲೆ ಅವಲಂಬಿತವಾಗಿದೆ ಎಂದು ಸಂಸದ ಡಾ. ಸಿ.ಎನ್. ಮಂಜುನಾಥ್ ಅಭಿಪ್ರಾಯ ಪಟ್ಟಿದ್ದಾರೆ. ಭಾರತದಲ್ಲಿ ಕೃಷಿ ಹಾಗೂ ತೋಟಗಾರಿಕೆ ಬೆಳೆ ಲಾಭದಲ್ಲಿದ್ದು, ಜನರು ತೋಟಗಾರಿಕಾ ಬೆಳೆಯತ್ತ ಹೆಚ್ಚು ಆಕರ್ಷಿತರಾಗುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಧ್ವನಿ : ಡಾ. ಸಿ.ಎನ್. ಮಂಜುನಾಥ್( 40 ಸೆಕೆಂಡುಗಳು)

ಕಾರ್ಯಕ್ರಮದಲ್ಲಿ ಉತ್ತಮ ಸಾಧನೆ ಮಾಡಿದ ರೈತರನ್ನು ಹಾಗೂ ವಿಜ್ಞಾನಿಗಳನ್ನು ಕೇಂದ್ರ ಸಚಿವ ಕುಮಾರ ಸ್ವಾಮಿ ಸನ್ಮಾನಿಸಿದರು.

*****************

ರಾಜ್ಯ ಸರ್ಕಾರದ ನಿರ್ಲಕ್ಷ್ಯದಿಂದಲೇ ಗೂಗಲ್ ಸಂಸ್ಥೆ ಆಂಧ್ರ ಪ್ರದೇಶದಲ್ಲಿ ಬಂಡವಾಳ ಹೂಡಿಕೆ ಮಾಡಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇನ್ನಾದರೂ ರಾಜ್ಯ ಸರ್ಕಾರದ ಸಚಿವರು ಉದ್ಯಮಿಗಳೊಂದಿಗೆ ವಿನಮ್ರತೆಯಿಂದ ವರ್ತಿಸಬೇಕೆಂದು ಮನವಿ ಮಾಡಿದ್ದಾರೆ. ಎರಡನೇ ಹಂತದ ನಗರಗಳಲ್ಲಿ ಕೆಲವೊಂದು ವಿನಾಯಿತಿ ನೀಡಬೇಕು ಹಾಗೂ ಉದ್ಯಮಿಗಳೊಂದಿಗೆ ಸರಿಯಾಗಿ ಮಾತುಕತೆ ನಡೆಸಬೇಕು ಎಂದು ತಿಳಿಸಿದ್ದಾರೆ. ಇದೇ ವೇಳೆ ಚಿತ್ತಾಪುರದಲ್ಲಿ ಆರ್.ಎಸ್.ಎಸ್. ಪಥ ಸಂಚಲನಕ್ಕೆ ನಿರಾಕರಿಸಿರುವ ಕುರಿತಂತೆ ಪ್ರತಿಕ್ರಿಯಿಸಿ ಸರ್ಕಾರದ ವೈಫಲ್ಯ ಮುಚ್ಚಿಹಾಕಲು ಆರ್.ಎಸ್.ಎಸ್. ಅನ್ನು ಬಳಸಿಕೊಳ್ಳುತ್ತಿದೆ ಎಂದು ದೂರಿದ್ದಾರೆ.

*****************

ಬೆಂಗಳೂರಿನ ಸೌಲಭ್ಯಗಳನ್ನು ಬಳಸಿಕೊಂಡು ಉದ್ಯಮ ಆರಂಭಿಸಿದವರು ಈಗ ಬೆಂಗಳೂರಿನ ಬಗ್ಗೆ ಟೀಕೆ ಮಾಡಿ ಟ್ವೀಟ್ ಮಾಡುತ್ತಿದ್ದಾರೆ" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

ತಿಳಿಸಿದ್ದಾರೆ. ಕೋರಮಂಗಲದ ವೀರ ಯೋಧ ಉದ್ಯಾನವನದಲ್ಲಿ ಇಂದು ಹಮ್ಮಿಕೊಂಡಿದ್ದ "ಬೆಂಗಳೂರು ನಡಿಗೆ" ಅಭಿಯಾನದ ಅಂಗವಾಗಿ "ನಾಗರಿಕರೊಂದಿಗೆ ಸಂವಾದ" ನಡೆಸಿ, ಅವರ ಅಹವಾಲುಗಳನ್ನು ಆಲಿಸಿದರು. ಬಳಿಕ ಮಾತನಾಡಿದ ಅವರು, ನಾವು ನಮ್ಮ ಮೂಲವನ್ನು ಮರೆಯಬಾರದು, ಮೂಲವನ್ನು ಮರೆತರೆ ಯಶಸ್ಸು ಸಾಧಿಸಲಾಗುವುದಿಲ್ಲ ಎಂಬುದನ್ನು ನಾನು ನಂಬಿದ್ದೇನೆ" ಎಂದು ಉದ್ಯಮಿಗಳಿಗೆ ತಿರುಗೇಟು ನೀಡಿದ್ದಾರೆ. ಸಾರ್ವಜನಿಕರು. ಕಸ ವಿಲೇವಾರಿಯಿಂದ ಹಿಡಿದು ಎಲ್ಲಾ ವಿಚಾರದಲ್ಲೂ ಸರ್ಕಾರಕ್ಕೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದ್ದಾರೆ.

*****************

ಕನ್ನಡದ ಕಂಪನ್ನು ಅಮೆರಿಕಾದಲ್ಲಿ ಹರಡುತ್ತಿರುವ ಅಕ್ಕ ಒಂದು ದೊಡ್ಡ ಸಂಸ್ಥೆಯಾಗಿದ್ದು ಈ ಸಂಸ್ಥೆಗೆ ಸರ್ಕಾರ ಹಾಗೂ ಸ್ವಾಮೀಜಿಗಳ ಬೆಂಬಲವಿದೆ ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚೆಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯ ನಗರದ  ಸರ್ ಎಂ ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಅಮೆರಿಕದ ಅಕ್ಕ ಸಂಸ್ಥೆಯ ೧೫ ನೇ ಬೆಳ್ಳಿ ಮಹೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದ ಅಕ್ಕ ೫ಏ ವಾಕಥಾನ್ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಮಾಜಿ ಸಚಿವ ಪುಟ್ಟರಾಜು ಮಾತನಾಡಿ, ಮಧುರಂಗಯ್ಯ ಅವರ ಸಾರಥ್ಯದಲ್ಲಿ ಅಕ್ಕ ಸಮ್ಮೇಳನದ ಕುರಿತು ದೊಡ್ಡ ಮಟ್ಟದಲ್ಲಿ ಜಾಗೃತಿ ಮುಗಿಸಲು 5ಕೆ ವಾಕಥಾನ್ ಹಮ್ಮಿಕೊಳ್ಳಲಾಗಿದೆ ಎಂದರು.

*****************

ವರ್ಷಕೊಮ್ಮೆ ಬೆಟ್ಟದ ಮೇಲೆ ದೀಪಾವಳಿ ಸಂದರ್ಭದಲ್ಲಿ ಮಾತ್ರ ದರ್ಶನ ನೀಡುವ ಚಿಕ್ಕಮಗಳೂರಿನ ಬಿಂಡಿಗ ದೇವಿರಮ್ಮ ದರ್ಶನ ಇಂದು ಮುಂಜಾನೆಯಿಂದ ಆರಂಭವಾಗಿದೆ. ದೇವಿರಮ್ಮ ಬೆಟ್ಟಕ್ಕೆ ಸಾವಿರಾರು ಭಕ್ತರು ಭೇಟಿ ನೀಡಿ  ದೇವಿಯ ದರ್ಶನ ಪಡೆಯುತ್ತಿದ್ದಾರೆ. ಇಂದು ಮತ್ತು ನಾಳೆ ೨ ದಿನಗಳು ಬೆಟ್ಟವನ್ನೇರಿ ದೇವಿಯ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ರಾಜ್ಯದ ಹಲವೆಡೆಯಿಂದ ಭಕ್ತರು ಆಗಮಿಸಿ ದೇವರ ದರ್ಶನ ಪಡೆಯುತ್ತಿದಾರೆ. ಇಂದಿನಿಂದ ಇದೇ ೧೩ರವರೆಗೆ ಈ ದೇವಾಲಯದ ವಿಶೇಷ ಪೂಜೆ ಜಾತ್ರಾ ಮಹೋತ್ಸವ ನೆರವೇರಲಿದೆ. ಜಿಲ್ಲಾಡಳಿತದಿಂದ ಭಿಗಿ ಭದ್ರತೆ ಕಲ್ಪಿಸಲಾಗಿದೆ.

*****************

ಬೆಳಕಿನ ಹಬ್ಬ ದೀಪಾವಳಿ ಆಚರಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜನತೆ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ದೀಪಾವಳಿ ಹಬ್ಬದ ಹಿನ್ನಲೆಯಲ್ಲಿ ಸುರಕ್ಷಿತ ಪ್ರದೇಶಗಳಲ್ಲಿ ಪಟಾಕಿ ಮಾರಾಟಕ್ಕೆ ಅನುಮತಿ ನೀಡಲಾಗಿದ್ದು, ಪಟಾಕಿ ಸಿಡಿಸಲು ಅನುಸರಿಸಬೇಕಾದ ನಿಯಮಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಸಾರ್ವಜನಿಕ ಆಸ್ತಿ ಮತ್ತು ಆರೋಗ್ಯದ ಸಂರಕ್ಷಣೆ, ಪರಿಸರ ಹಾಗೂ ಶಬ್ದ ಮಾಲಿನ್ಯ ನಿಯಂತ್ರಣದಲ್ಲಿಡುವ ಉದ್ದೇಶದಿಂದ ಹೆಚ್ಚು ಶಬ್ದ ಮಾಡುವ, ಮಾಲಿನ್ಯ ಉಂಟುಮಾಡುವ ಪಟಾಕಿಗಳ ಮಾರಾಟ ಮತ್ತು ಉಪಯೋಗಿಸುವುದನ್ನು ನಿಷೇಧಿಸಲಾಗಿದೆ. ದೀಪಾವಳಿ ಹಬ್ಬದ ದಿನದಂದು ರಾತ್ರಿ ೮ ಗಂಟೆಯಿಂದ ರಾತ್ರಿ ೧೦ ಗಂಟೆಯವರೆಗೆ ಮಾತ್ರ ಪಟಾಕಿಗಳನ್ನು ಹಚ್ಚಲು ಅವಕಾಶವಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ.

*****************

ಬೆಂಗಳೂರು ಉತ್ತರ ನಗರ ಪಾಲಿಕೆಯನ್ನು ಬ್ಲಾಕ್ ಸ್ಪಾಟ್ ಮುಕ್ತ ಪ್ರದೇಶವನ್ನಾಗಿ ಮಾಡುವ ಉದ್ದೇಶದಿಂದ, ಬೆಂಗಳೂರು ಉತ್ತರ ನಗರ ಪಾಲಿಕೆಯ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ನೇತೃತ್ವದಲ್ಲಿ ಹೆಬ್ಬಾಳ ವಿಭಾಗ ವ್ಯಾಪ್ತಿಯಲ್ಲಿ ಸಾಮೂಹಿಕ ಸ್ವಚ್ಛತಾ ಅಭಿಯಾನ ಕೈಗೊಳ್ಳಲಾಯಿತು. ಅಭಿಯಾನದಲ್ಲಿ ಒಟ್ಟು ೪೦ ಪೌರಕಾರ್ಮಿಕರು, ೨ ಟ್ರ್ಯಾಕ್ಟರ್‌ಗಳು ಹಾಗೂ ಮೂರು ಆಟೋ ಟಿಪ್ಪರ್, ೧ ಕಾಂಪ್ಯಾಕ್ಟರ್ ಬಳಸಿ ಹೂಳು ಮತು ಕಸ ತೆರವು ಕಾರ್ಯಗಳನ್ನು ಕೈಗೊಳ್ಳಲಾಯಿತು. ಅಭಿಯಾನದ ಮೂಲಕ ೨.೫ ಟನ್ ತ್ಯಾಜ್ಯ ಹಾಗೂ ೧.೫ ಟನ್ ಕಟ್ಟಡ ಭಗ್ನಾವಶೇಷಗಳು ಸೇರಿ ಒಟ್ಟು ೪ ಟನ್ ತ್ಯಾಜ್ಯವನ್ನು ವಿಲೇವಾರಿ ಮಾಡಲಾಗಿದೆ.

*****************

ಪೌಷ್ಠಿಕತೆಯುಕ್ತ ಭಾರತ ನಿರ್ಮಾಣ, ಗರ್ಭಿಣಿಯರು ಮತ್ತು ಮಕ್ಕಳ ಸಮಗ್ರ ಅಭಿವೃದ್ಧಿ ಮತ್ತು ಪೌಷ್ಠಿಕಾಂಶ ಖಚಿತಪಡಿಸುವುದು ರಾಷ್ಟ್ರೀಯ ಪೋಷಣ್ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಶಾಸಕ ಬಿ.ಪಿ.ಹರೀಶ್ ತಿಳಿಸಿದ್ದಾರೆ. ದಾವಣಗೆರೆ ಜಿಲ್ಲೆಯ ಹರಿಹರದ ಗುರುಭವನದಲ್ಲಿ ಹಮ್ಮಿಕೊಂಡಿದ್ದ ಪೋಷಣ್ ಮಾಸಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ರಾಷ್ಟ್ರೀಯ ಪೋಷಣ್ ಅಭಿಯಾನ ಸೇರಿದಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ಯೋಜನೆಗಳ

ಯಶಸ್ಸಿನಲ್ಲಿ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.

*****************

ದಾವಣಗೆರೆ ಜಿಲ್ಲೆಯಾದ್ಯಂತ ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಮಕ್ಕಳ ದುಡಿಮೆಯನ್ನು ನಿಯಂತ್ರಿಸಲು ಹಾಗೂ ನಿಷೇಧಿಸಲು ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಕಾಯಿದೆಯನ್ನು ಉಲ್ಲಂಘಿಸಿ ಮಕ್ಕಳನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ದುಡಿಸಿಕೊಳ್ಳುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

*****************